# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ–577007

## ಸಿಂಡಿಕೇಟ್ ಸಾಮಾನ್ಯ ಸಭೆಯ ನಡಾವಳಿಗಳು

## ದಿನಾಂಕ:18.03.2025

# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577007
ದೂರವಾಣಿ ಸಂಖ್ಯೆ: 08192-208029, ಫ್ಯಾಕ್ಸ್ ಸಂಖ್ಯೆ: 08192-208008

: ವಿದ್ಯಾದಾನೇನ ವರ್ಧತೆ, ವಿದ್ಯಾ ವಿನಯೇನ ಶೋಭತೆ, ವಿದ್ಯಯಾ ವಿಂಧತೆ ಅಮೃತಂ :

ಸಂಖ್ಯೆ:ದಾವಿವಿ/ಪ್ರಾಧಿಕಾರ/ಸಿಂ/724/2024-25/ 5029 ದಿನಾಂಕ:20.03.2025

ಇವರಿಗೆ,

ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ.

ಮಾನ್ಯರೆ,

ವಿಷಯ : ದಿನಾಂಕ:18.03.2025 ರಂದು ಜರುಗಿದ ಸಿಂಡಿಕೇಟ್ ಸಾಮಾನ್ಯ ಸಭೆಯ ನಡಾವಳಿಗಳು.

ಉಲ್ಲೇಖ : ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:20.03.2025

****

ವಿಶ್ವವಿದ್ಯಾನಿಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು ಅಧ್ಯಾಯ - III ರ ಪ್ರಕರಣ 16 (i) ರ ರೀತ್ಯ ದಿನಾಂಕ:18.03.2025 ರಂದು ವಿಶ್ವವಿದ್ಯಾನಿಲಯದ ಆಡಳಿತ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ಬೆಳಗ್ಗೆ 11:30 ಗಂಟೆಗೆ ಜರುಗಿದ ಸಿಂಡಿಕೇಟ್ ಸಾಮಾನ್ಯ ಸಭೆಯ ನಡಾವಳಿಗಳನ್ನು ಈ ಮೂಲಕ ತಮಗೆ ಕಳುಹಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ರಡಿ ರಚಿಸಲಾಗಿರುವ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು - ಅಧ್ಯಾಯ-III ರ ಪ್ರಕರಣ 16 (i) ರ ರೀತ್ಯ ನಡಾವಳಿ ತಲುಪಿದ **ಏಳು ದಿನಗಳೊಳಗಾಗಿ** ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

ತಮ್ಮ ವಿಶ್ವಾಸಿ,

ಕುಲಸಚಿವರು

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ-577007

**ಪ್ರತಿಗಳು:**

1. ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು-560 001.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು- 560 001.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು), ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
5. ಎಲ್ಲಾ ಸಿಂಡಿಕೇಟ್ ಸದಸ್ಯರುಗಳಿಗೆ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
6. ಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
7. ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
8. ನಿಕಾಯಗಳ ಡೀನರುಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
9. ಗ್ರಂಥಪಾಲಕರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
10. ಕಾರ್ಯನಿರ್ವಾಹಕ ಇಂಜಿನಿಯರ್, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
11. ಉಪಕುಲಸಚಿವರು, ಶೈಕ್ಷಣಿಕ/ಮಾಸನಿ/ಅಭಿವೃದ್ಧಿ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
12. ನಿರ್ದೇಶಕರು, ಸಿ.ಡಿ.ಸಿ/ಐಕ್ಯೂಎಸಿ/ಪಿ.ಎಂ.ಇ./ದೈಹಿಕ ಶಿಕ್ಷಣ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
13. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ, ದೃಶ್ಯಕಲಾ ಕಾಲೇಜು, ದಾವಣಗೆರೆ-577004
14. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ, ರಾ.ಹೆ.13, ಗುಡ್ಡದ ರಂಗವ್ವನಹಳ್ಳಿ, ಚಿತ್ರದುರ್ಗ-577502
15. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯದ ಸರ್ಕಾರಿ ಪ್ರಥಮ ದರ್ಜೆ ಘಟಕ ಕಾಲೇಜು, ತುರುವನೂರು, ಚಿತ್ರದುರ್ಗ-577517
16. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯದ ಸರ್ಕಾರಿ ಪ್ರಥಮ ದರ್ಜೆ ಘಟಕ ಕಾಲೇಜು, ಹರಿಯಬ್ಬೆ, ಚಿತ್ರದುರ್ಗ-577546
17. ಆಪ್ತ ಕಾರ್ಯಾಲಯ, ಮಾನ್ಯ ಕುಲಪತಿಗಳು/ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
18. ಕಛೇರಿ ಪ್ರತಿ.

# ದಾವಣಗೆರೆ ವಿಶ್ವವಿದ್ಯಾನಿಲಯ

## ವಿಶ್ವವಿದ್ಯಾನಿಲಯದಲ್ಲಿ ದಿನಾಂಕ:18.03.2025 ರಂದು ಜರುಗಿದ
## ಸಿಂಡಿಕೇಟ್ ಸಾಮಾನ್ಯ ಸಭೆಯ ನಡಾವಳಿಗಳು

**ಸಭೆಯಲ್ಲಿ ಹಾಜರಿದ್ದ ಸದಸ್ಯರು:**

1. ಪ್ರೊ. ಬಿ.ಡಿ ಕುಂಬಾರ., ಮಾನ್ಯ ಕುಲಪತಿಗಳು : ಅಧ್ಯಕ್ಷರು
2. ಪ್ರೊ. ಮಹಾಬಲೇಶ್ವರ ಯು.ಎಸ್. ಡೀನರು, ವಿಜ್ಞಾನ ನಿಕಾಯ : ಸದಸ್ಯರು
3. ಶ್ರೀಮತಿ ಶಾರದಾ ಪಾಟೀಲ., ಮಾನ್ಯ ರಾಜ್ಯಪಾಲರಿಂದ ನಾಮನಿರ್ದೇಶಿತರು : ಸದಸ್ಯರು
4. ಡಾ. ಉಮೇಶ್ ಬಿ. ಎನ್., ಮಾನ್ಯ ರಾಜ್ಯಪಾಲರಿಂದ ನಾಮನಿರ್ದೇಶಿತರು : ಸದಸ್ಯರು
5. ಡಾ. ಕೆ.ಟಿ. ನಾಗರಾಜ ನಾಯ್ಕ., ಪ್ರಾಚಾರ್ಯರು : ಸದಸ್ಯರು
6. ಡಾ. ಬಾಬು ಕುಮಾರ್ ಓ., ಪ್ರಾಚಾರ್ಯರು : ಸದಸ್ಯರು
7. ಡಾ. ಗಿರೀಶ್ ಟಿ., ಪ್ರಾಚಾರ್ಯರು : ಸದಸ್ಯರು
8. ಶ್ರೀಮತಿ ಉಷಾ ಎಸ್., ಆರ್, ಪ್ರಾಚಾರ್ಯರು : ಸದಸ್ಯರು
9. ಶ್ರೀ ದ್ಯಾಮಪ್ಪ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
10. ಶ್ರೀ ತಿಪ್ಪೇಸ್ವಾಮಿ ಹೆಚ್., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
11. ಡಾ. ಜಿ. ಕೆ. ಪ್ರೇಮ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
12. ಶ್ರೀ ಶಬೀರ್ ಅಲಿಖಾನ್., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
13. ಶ್ರೀ ಪ್ರಶಾಂತ್ ಆರ್. ಟಿ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
14. ಡಾ. ಪ್ರಶಾಂತ ಎನ್. ಸಿ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
15. ಪ್ರೊ. ರವಿಕುಮಾರ್ ಪಾಟೀಲ್ ಹೆಚ್.ಎಸ್., ಪ್ರಾಧ್ಯಾಪಕರು : ಸದಸ್ಯರು
16. ಡಾ. ರಮೇಶ್ ಸಿ. ಕೆ., ಕುಲಸಚಿವರು (ಪರೀಕ್ಷಾಂಗ) : ಸದಸ್ಯರು
17. ಡಾ. ಶಶಿಧರ್ ಆರ್., ಕುಲಸಚಿವರು, ಆಡಳಿತ (ಪ್ರಭಾರೆ) : ಸದಸ್ಯ ಕಾರ್ಯದರ್ಶಿ

ನಿಯಮಾನುಸಾರ ಕನಿಷ್ಠ ಅಗತ್ಯ ಸಂಖ್ಯೆ 08 ಕ್ಕಿಂತ ಹೆಚ್ಚು ಅಂದರೆ 17 ಸದಸ್ಯರುಗಳು ಹಾಜರಿರುವುದನ್ನು ಖಚಿತಪಡಿಸಿಕೊಂಡು ನಿಗದಿತ ಸಮಯಕ್ಕೆ ಸರಿಯಾಗಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯದಾಗಿ ಕುಲಸಚಿವರು ಮಾನ್ಯ ಕುಲಪತಿಗಳನ್ನು ಸಭೆಗೆ ಸ್ವಾಗತಿಸಿ ಅಧ್ಯಕ್ಷತೆಯನ್ನು ವಹಿಸುವಂತೆ ಕೋರಿದರು ಹಾಗೂ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ವರ್ಗದಿಂದ ಸಿಂಡಿಕೇಟಿಗೆ ನಾಮನಿರ್ದೇಶನಗೊಂಡ ಪ್ರೊ. ರವಿಕುಮಾರ್ ಪಾಟೀಲ್ ಹೆಚ್.ಎಸ್, ಇವರನ್ನು ಅಭಿನಂದಿಸಿ ಸಭೆಗೆ ಸ್ವಾಗತಿಸಿದರು ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರುಗಳಿಗೆ ಸ್ವಾಗತವನ್ನು ಕೋರಿದರು. ತದನಂತರ, ಸಭೆಯ ಕಲಾಪಗಳನ್ನು ಈ ಮುಂದಿನಂತೆ ಪ್ರಾರಂಭಿಸಲಾಯಿತು.

ಕುಲಸಚಿವರು ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 1 | |
|---|---|
| ವಿಷಯ ಸಂಖ್ಯೆ: | ಸಿಂ.01(a)/(03/25) |

**–:ಟಿಪ್ಪಣಿ:–**

**ವಿಷಯ: ದಿನಾಂಕ:21.01.2025 ರಂದು ಏರ್ಪಡಿಸಲಾಗಿದ್ದ ಸಿಂಡಿಕೇಟ್ ಸಾಮಾನ್ಯ ಸಭಾ ನಡಾವಳಿಗಳ ದೃಢೀಕರಣ.**

*****

ದಿನಾಂಕ:21.01.2025 ರಂದು ಏರ್ಪಡಿಸಲಾಗಿದ್ದ ಸಿಂಡಿಕೇಟ್ ಸಾಮಾನ್ಯ ಸಭೆಯ ನಡಾವಳಿಗಳನ್ನು ದಿನಾಂಕ:31.01.2025 ರಂದು ವಿಶ್ವವಿದ್ಯಾನಿಲಯದ ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ ಕಳುಹಿಸಲಾಗಿತ್ತು. ಸದರಿ ನಡಾವಳಿಗಳನ್ನು ದೃಢೀಕರಿಸುವ ಸಂಬಂಧ ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ದೃಢೀಕರಣಕ್ಕಾಗಿ ಸಲ್ಲಿಸಿದೆ.

:: ನಿರ್ಣಯ ::

ದಿನಾಂಕ:21.01.2025 ರಂದು ಏರ್ಪಡಿಸಲಾಗಿದ್ದ ಸಿಂಡಿಕೇಟ್ ಸಾಮಾನ್ಯ ಸಭೆಯ ನಡಾವಳಿಗಳ ಕುರಿತು ಕ್ರಮವಹಿಸಿರುವುದರ ಸಂಪೂರ್ಣ (Action Taken Report) ಮಾಹಿತಿಯನ್ನು ಸಭೆಯ ಗಮನಕ್ಕೆ ತರಲಾಯಿತು.

ಮುಂದುವರೆದು, ಸದರಿ ನಡಾವಳಿಗಳ ಕುರಿತು ಚರ್ಚಿಸಿ ನಡಾವಳಿಗಳನ್ನು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 2 | |
|---|---|
| ವಿಷಯ ಸಂಖ್ಯೆ: | ಸಿಂ.01(b)/(03/25) |

## –:ಟಿಪ್ಪಣಿ:–

**ವಿಷಯ: ದಿನಾಂಕ:06.02.2025 ರಂದು ಏರ್ಪಡಿಸಲಾಗಿದ್ದ ಸಿಂಡಿಕೇಟ್ ವಿಶೇಷ ಸಭಾ ನಡಾವಳಿಗಳ ದೃಢೀಕರಣ.**

*****

ದಿನಾಂಕ:06.02.2025 ರಂದು ಏರ್ಪಡಿಸಲಾಗಿದ್ದ ಸಿಂಡಿಕೇಟ್ ವಿಶೇಷ ಸಭೆಯ ನಡಾವಳಿಗಳನ್ನು ದಿನಾಂಕ:17.02.2025 ರಂದು ವಿಶ್ವವಿದ್ಯಾನಿಲಯದ ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ ಕಳುಹಿಸಲಾಗಿತ್ತು. ಸದರಿ ನಡಾವಳಿಗಳನ್ನು ದೃಢೀಕರಿಸುವ ಸಂಬಂಧ ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ದೃಢೀಕರಣಕ್ಕಾಗಿ ಸಲ್ಲಿಸಿದೆ.

:: ನಿರ್ಣಯ ::

ದಿನಾಂಕ:06.02.2025 ರಂದು ಏರ್ಪಡಿಸಲಾಗಿದ್ದ ಸಿಂಡಿಕೇಟ್ ವಿಶೇಷ ಸಭೆಯ ನಡಾವಳಿಗಳ ಕುರಿತು ಕ್ರಮವಹಿಸಿರುವುದರ ಸಂಪೂರ್ಣ (Action Taken Report) ಮಾಹಿತಿಯನ್ನು ಸಭೆಯ ಗಮನಕ್ಕೆ ತರಲಾಯಿತು.

ಮುಂದುವರೆದು, ಸದರಿ ನಡಾವಳಿಗಳ ಕುರಿತು ಚರ್ಚಿಸಿ ನಡಾವಳಿಗಳನ್ನು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 3 | |
|---|---|
| ವಿಷಯ ಸಂಖ್ಯೆ: | ಸಿಂ.01(c)/(03/25) |

## –: ಟಿಪ್ಪಣಿ :–

**ವಿಷಯಃ ಪಿ.ಹೆಚ್‌.ಡಿ. ಪದವಿಗೆ ಸಂಬಂಧಿಸಿದ ಮಾನದಂಡಗಳು ಹಾಗೂ ಕಾರ್ಯವಿಧಾನಗಳ ನಿರ್ವಹಣೆಗೆ ಸಂಬಂಧಿಸಿದ ವಿನಿಯಮಗಳಿಗೆ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ಪಿ.ಹೆಚ್‌.ಡಿ. ಪದವಿಗೆ ಸಂಬಂಧಿಸಿದ ಮಾನದಂಡಗಳು ಹಾಗೂ ಕಾರ್ಯವಿಧಾನಗಳ ನಿರ್ವಹಣೆಗೆ ಸಂಬಂಧಿಸಿದ – Regulations Governing the Degree of Doctor of Philosophy - 2024 – ವಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ವಿದ್ಯಾವಿಷಯಕ ಪರಿಷತ್‌ ಸಭೆ(09.07.2024) ಸಿಂಡಿಕೇಟ್‌ ಸಭೆ(13.08.2024) ಹಾಗೂ ಹಣಕಾಸು ಸಮಿತಿ(28.10.2024) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ವಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿರುತ್ತಾರೆ.

ಆದ್ದರಿಂದ, ಸದರಿ ವಿನಿಯಮಗಳಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ವಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್‌ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

## :: ನಿರ್ಣಯ ::

ವಿಶ್ವವಿದ್ಯಾನಿಲಯದ ಪಿ.ಹೆಚ್‌.ಡಿ. ಪದವಿಗೆ ಸಂಬಂಧಿಸಿದಂತೆ – Regulations Governing the Degree of Doctor of Philosophy - 2024 – ವಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 4 | |
|---|---|
| ವಿಷಯ ಸಂಖ್ಯೆ: | ಸಿಂ.01(d)/(03/25) |

## –: ಟಿಪ್ಪಣಿ :–

**ವಿಷಯ: ಸಿಂಡಿಕೇಟಿನ (Syndicate) ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ ಪರಿನಿಯಮಗಳಿಗೆ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ಸಿಂಡಿಕೇಟಿನ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of Syndicate of Davangere University – ಪರಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ವಿದ್ಯಾವಿಷಯಕ ಪರಿಷತ್ ಸಭೆ(09.07.2024) ಸಿಂಡಿಕೇಟ್ ಸಭೆ(13.08.2024) ಹಾಗೂ ಹಣಕಾಸು ಸಮಿತಿ(28.10.2024) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ಪರಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿರುತ್ತಾರೆ. ಆದ್ದರಿಂದ, ಸದರಿ ಪರಿನಿಯಮಗಳಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ಪರಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

## :: ನಿರ್ಣಯ ::

ವಿಶ್ವವಿದ್ಯಾನಿಲಯದ ಸಿಂಡಿಕೇಟಿನ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of Syndicate of Davangere University – ಪರಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು　　　　ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 5 | |
|---|---|
| ವಿಷಯ ಸಂಖ್ಯೆ: | ಸಿಂ.01(e)/(03/25) |

## –: ಟಿಪ್ಪಣಿ :–

**ವಿಷಯ:** **ವಿದ್ಯಾವಿಷಯಕ ಪರಿಷತ್ತಿನ (Academic Council) ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ ಪರಿನಿಯಮಗಳಿಗೆ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ವಿದ್ಯಾವಿಷಯಕ ಪರಿಷತ್ತಿನ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Academic Council of Davangere University – ಪರಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ವಿದ್ಯಾವಿಷಯಕ ಪರಿಷತ್ ಸಭೆ (09.07.2024) ಸಿಂಡಿಕೇಟ್ ಸಭೆ (13.08.2024) ಹಾಗೂ ಹಣಕಾಸು ಸಮಿತಿ(28.10.2024) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ಪರಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿರುತ್ತಾರೆ. ಆದ್ದರಿಂದ, ಸದರಿ ಪರಿನಿಯಮಗಳಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ಪರಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

### :: ನಿರ್ಣಯ ::

ವಿಶ್ವವಿದ್ಯಾನಿಲಯದ ವಿದ್ಯಾವಿಷಯಕ ಪರಿಷತ್ತಿನ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Academic Council of Davangere University – ಪರಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 6 | |
|---|---|
| ವಿಷಯ ಸಂಖ್ಯೆ: | ಸಿಂ.01(f)/(03/25) |

## –: ಟಿಪ್ಪಣಿ :–

**ವಿಷಯ: ಹಣಕಾಸು ಸಮಿತಿ (Finance Committee) ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ ಪರಿನಿಯಮಗಳಿಗೆ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ಹಣಕಾಸು ಸಮಿತಿ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Finance Committee of Davangere University – ಪರಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ಸಿಂಡಿಕೇಟ್ ಸಭೆ (13.08.2024) ವಿದ್ಯಾವಿಷಯಕ ಪರಿಷತ್ ಸಭೆ (27.09.2024) ಹಾಗೂ ಹಣಕಾಸು ಸಮಿತಿ(28.10.2024) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ಪರಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿರುತ್ತಾರೆ.

ಆದ್ದರಿಂದ, ಸದರಿ ಪರಿನಿಯಮಗಳಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ಪರಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

## :: ನಿರ್ಣಯ ::

ವಿಶ್ವವಿದ್ಯಾನಿಲಯದ ಹಣಕಾಸು ಸಮಿತಿ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Finance Committee of Davangere University – ಪರಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 7 | |
|---|---|
| ವಿಷಯ ಸಂಖ್ಯೆ: | ಸಿಂ.01(g)/(03/25) |

# –: ಟಿಪ್ಪಣಿ :–

**ವಿಷಯ: ಅಧ್ಯಯನ ಮಂಡಳಿ (Board of Studies) ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ ಪರಿನಿಯಮಗಳಿಗೆ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ಅಧ್ಯಯನ ಮಂಡಳಿ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Board of Studies of Davangere University – ಪರಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ಸಿಂಡಿಕೇಟ್ ಸಭೆ (13.08.2024) ವಿದ್ಯಾವಿಷಯಕ ಪರಿಷತ್ ಸಭೆ (27.09.2024) ಹಾಗೂ ಹಣಕಾಸು ಸಮಿತಿ(28.10.2024) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ಪರಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿರುತ್ತಾರೆ. ಆದ್ದರಿಂದ, ಸದರಿ ಪರಿನಿಯಮಗಳಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ಪರಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

## :: ನಿರ್ಣಯ ::

ವಿಶ್ವವಿದ್ಯಾನಿಲಯದ ಅಧ್ಯಯನ ಮಂಡಳಿ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Board of Studies of Davangere University – ಪರಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 8 | |
|---|---|
| ವಿಷಯ ಸಂಖ್ಯೆ: | ಸಿಂ.01(h)/(03/25) |

## –: ಟಿಪ್ಪಣಿ :–

**ವಿಷಯ: ಶೈಕ್ಷಣಿಕ ನಿಕಾಯಗಳ (Various Faculties) ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ ಪರಿನಿಯಮಗಳಿಗೆ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ಶೈಕ್ಷಣಿಕ ನಿಕಾಯಗಳ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Faculties of Davangere University – ಪರಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ಸಿಂಡಿಕೇಟ್ ಸಭೆ (13.08.2024) ವಿದ್ಯಾವಿಷಯಕ ಪರಿಷತ್ ಸಭೆ (27.09.2024) ಹಾಗೂ ಹಣಕಾಸು ಸಮಿತಿ(28.10.2024) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ಪರಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿರುತ್ತಾರೆ.

ಆದ್ದರಿಂದ, ಸದರಿ ಪರಿನಿಯಮಗಳಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ಪರಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

## :: ನಿರ್ಣಯ ::

ವಿಶ್ವವಿದ್ಯಾನಿಲಯದ ಶೈಕ್ಷಣಿಕ ನಿಕಾಯಗಳ ಸಭಾ ವ್ಯವಹಾರಗಳ ನಿರ್ವಹಣೆಗೆ ಸಂಬಂಧಿಸಿದ – Statutes Governing the Rules for transactions of Business at the Meetings of the Faculties of Davangere University – ಪರಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 9 | |
|---|---|
| ವಿಷಯ ಸಂಖ್ಯೆ: | ಸಿಂ.01(i)/(03/25) |

## –: ಟಿಪ್ಪಣಿ :–

ವಿಷಯ: **ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ Innovation and Start-up Incubation Centre (DUISIC) ಪ್ರಾರಂಭಿಸುವ ಕುರಿತಾದ ಪರಿನಿಯಮಗಳನ್ನು ಅನುಮೋದಿಸುವ ಕುರಿತು.**

*********

ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ Innovation and Start-up Incubation Centre (DUISIC) ಪ್ರಾರಂಭಿಸುವ ಕುರಿತಾದ ಪರಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ವಿದ್ಯಾವಿಷಯಕ ಪರಿಷತ್ ಸಭೆ (27.09.2024), ಸಿಂಡಿಕೇಟ್ ಸಭೆ (03.10.2024) ಹಾಗೂ ಹಣಕಾಸು ಸಮಿತಿ(28.10.2024) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ಪರಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಿರುತ್ತಾರೆ.

ಆದ್ದರಿಂದ, ಸದರಿ ಪರಿನಿಯಮಗಳಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ಪರಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

### :: ನಿರ್ಣಯ ::

ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ Innovation and Start-up Incubation Centre (DUISIC) ಪ್ರಾರಂಭಿಸುವ ಕುರಿತಾದ ಪರಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ – 10 | |
|---|---|
| ವಿಷಯ ಸಂಖ್ಯೆ: | ಸಿಂ.01(j)/(03/25) |

## –: ಟಿಪ್ಪಣಿ :–

**ವಿಷಯ: ವಿಶ್ವವಿದ್ಯಾನಿಲಯದಲ್ಲಿ ರಚಿಸಿಕೊಂಡಿರುವ ಪಿ.ಎಂ.ಇ. (P.M.E) ಬೋರ್ಡ್ ಪರಿನಿಯಮಗಳಿಗೆ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿನ ಸಂಲಗ್ನಗೊಂಡ ಕಾಲೇಜುಗಳಲ್ಲಿ ಶೈಕ್ಷಣಿಕ ಹಾಗೂ ಸ್ನಾತಕೋತ್ತರ ಮಟ್ಟದಲ್ಲಿನ ಶೈಕ್ಷಣಿಕ/ಸಂಶೋಧನೆ ಹಾಗೂ ಇನ್ನಿತರ ಸಂಶೋಧನಾ ಚಟುವಟಿಕೆಗಳನ್ನು ನಿರ್ವಹಣೆ ಮಾಡುವ ಸಂಬಂಧ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ–2000 ರನ್ವಯ – Statute Governing the Institution of Planing, Monitoring and Evaluation Board in Davangere University (P.M.E.B) – ಪರಿನಿಯಮಗಳನ್ನು ರಚಿಸಿಕೊಂಡು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳಾದ ವಿದ್ಯಾವಿಷಯಕ ಪರಿಷತ್ ಸಭೆ (16.06.2023) ಹಾಗೂ ಸಿಂಡಿಕೇಟ್ ಸಭೆ (17.06.2023) ಸಭೆಯ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸರ್ಕಾರವು ಸದರಿ ಪರಿನಿಯಮಗಳಿಗೆ ಸಂಬಂಧಿಸಿದಂತೆ ಕೆಲವು ತಿದ್ದುಪಡಿಗಳನ್ನು ಸೂಚಿಸಿ ಪುನಃ ವಿವಿಧ ಪ್ರಾಧಿಕಾರಗಳ ಅನುಮೋದನೆ ಪಡೆದು ಪ್ರಸ್ತುತ ಕುಲಪತಿಗಳು ಹಾಗೂ ಕುಲಸಚಿವರ ಸಹಿಯೊಂದಿಗೆ ಪುನಃ ಸಲ್ಲಿಸುವಂತೆ ತಿಳಿಸಲಾಗಿದೆ.

ಆದ್ದರಿಂದ, ಪಿ.ಎಂ.ಇ (P.M.E) ಬೋರ್ಡ್ ನ ಪರಿನಿಯಮಗಳಲ್ಲಿ ಕೆಲವು ತಿದ್ದುಪಡಿ ಮಾಡಲಾಗಿದ್ದು, ಪ್ರಾಧಿಕಾರಗಳ ಅನುಮೋದನೆ ಪಡೆದು ಪುನಃ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ.

ಆದ್ದರಿಂದ, ಸದರಿ ಪರಿನಿಯಮಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.

### :: ನಿರ್ಣಯ ::

ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿನ ಸಂಲಗ್ನಗೊಂಡ ಕಾಲೇಜುಗಳಲ್ಲಿ ಶೈಕ್ಷಣಿಕ ಹಾಗೂ ಸ್ನಾತಕೋತ್ತರ ಮಟ್ಟದಲ್ಲಿನ ಶೈಕ್ಷಣಿಕ/ಸಂಶೋಧನೆ ಹಾಗೂ ಇನ್ನಿತರ ಸಂಶೋಧನಾ ಚಟುವಟಿಕೆಗಳನ್ನು ನಿರ್ವಹಣೆ ಮಾಡುವುದಕ್ಕೆ ಸಂಬಂಧಿಸಿದ Statute Governing the Institution of Planing, Monitoring and Evaluation Board in Davangere University (P.M.E.B) ಪರಿನಿಯಮಗಳನ್ನು ಸರ್ಕಾರದ ಮೂಲಕ ಮಾನ್ಯ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು ಕುಲಪತಿಗಳು

# –ಃ ಟಿಪ್ಪಣಿ ಃ–

ವಿಷಯಃ ಡಾ. ನಾಗರಾಜು ಎನ್, ಸಹಾಯಕ ಪ್ರಾಧ್ಯಾಪಕರು, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ ಇವರನ್ನು ನಿಯೋಜನಾ **(Deputation)** ಕಾರ್ಯದ ಮೇಲೆ ಮೈಸೂರು ವಿಶ್ವವಿದ್ಯಾನಿಲಯಕ್ಕೆ ನಿಯೋಜಿಸುವಂತೆ ಕೋರಿರುವ ಬಗ್ಗೆ.

ಉಲ್ಲೇಖಃ
1. ಡಾ. ನಾಗರಾಜು ಎನ್, ಸಹಾಯಕ ಪ್ರಾಧ್ಯಾಪಕರು ಇವರ ಪತ್ರ ಸಂಖ್ಯೆಃದಾವಿವಿ/ರಾಜ್ಯಶಾಸ್ತ್ರ/77/2024–25, ದಿಃ10.02.2025.
2. ಸರ್ಕಾರದ ಪತ್ರ ಸಂಖ್ಯೆಃ ಇಡಿ 07 ಯುಎಂವಿ 2025, ದಿನಾಂಕಃ 14.02.2025.

*********

ಡಾ. ನಾಗರಾಜು ಎನ್, ಸಹಾಯಕ ಪ್ರಾಧ್ಯಾಪಕರು, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ – ಇವರು ತಮ್ಮ ವೈಯಕ್ತಿಕ ಕಾರಣಗಳಿಂದಾಗಿ ದಾವಣಗೆರೆ ವಿಶ್ವವಿದ್ಯಾನಿಲಯದಿಂದ ಮೈಸೂರು ವಿಶ್ವವಿದ್ಯಾನಿಲಯಕ್ಕೆ ನಿಯೋಜಿತ ಕಾರ್ಯದ ಮೇಲೆ ನಿಯೋಜನೆ (Deputation) ಮಾಡುವಂತೆ ಉಲ್ಲೇಖ (1)ರ ಪತ್ರದಲ್ಲಿ ಕೋರಿರುತ್ತಾರೆ.

ಮುಂದುವರೆದು, ಸದರಿಯವರನ್ನು ಮೈಸೂರು ವಿಶ್ವವಿದ್ಯಾನಿಲಯಕ್ಕೆ ಖಾಯಂ ವರ್ಗಾವಣೆ ಮಾಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರನ್ವಯ ಹಾಗೂ ವಿಶ್ವವಿದ್ಯಾನಿಲಯ ವರ್ಗಾವಣೆಗೆ ಸಂಬಂಧಿಸಿದಂತೆ ರಚಿಸಿಕೊಂಡಿರುವ ವೃಂದ ಮತ್ತು ನೇಮಕಾತಿ ನಿಯಮ ಮತ್ತು ಪರಿನಿಯಮಗಳನ್ವಯ ಪರಿಶೀಲಿಸಿ, ಮೈಸೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಯು ಖಾಲಿಯಿರುವ ಮಾಹಿತಿಯೊಂದಿಗೆ ಸೂಕ್ತ ಶಿಫಾರಸ್ಸು ಹಾಗೂ ಸ್ಪಷ್ಟ ಅಭಿಪ್ರಾಯವನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಉಲ್ಲೇಖ (2)ರ ಪತ್ರದಲ್ಲಿ ತಿಳಿಸಿರುತ್ತಾರೆ. ಈ ಕುರಿತು ಸದರಿ ವಿಷಯವನ್ನು ದಿನಾಂಕಃ18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅನುಮೋದನೆಗಾಗಿ ಸಲ್ಲಿಸಿದೆ.

## :: ನಿರ್ಣಯ ::

ಡಾ. ನಾಗರಾಜು ಎನ್, ಸಹಾಯಕ ಪ್ರಾಧ್ಯಾಪಕರು, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ ಇವರನ್ನು ದಾವಣಗೆರೆ ವಿಶ್ವವಿದ್ಯಾನಿಲಯದಿಂದ ಮೈಸೂರು ವಿಶ್ವವಿದ್ಯಾನಿಲಯಕ್ಕೆ ನಿಯೋಜಿತ ಕಾರ್ಯದ ಮೇಲೆ ನಿಯೋಜನೆ ಮಾಡಲು (Deputation) ಸಭೆಯು ಒಮ್ಮತದಿಂದ ನಿರಾಕರಿಸಿತು.

ಕುಲಸಚಿವರು　　　　　　　　ಕುಲಪತಿಗಳು

| ಮಾ.ಸ.ನಿ. ವಿಭಾಗ – 12 | |
|---|---|
| ವಿಷಯ ಸಂಖ್ಯೆ: | ಸಿಂ.02(b)/(03/25) |

## –: ಟಿಪ್ಪಣಿ :–

**ವಿಷಯ: ಪ್ರೊ. ಗಾಯತ್ರಿ ದೇವರಾಜ, ಹಿರಿಯ ಪ್ರಾಧ್ಯಾಪಕರು (ಅಮಾನತು), ಸ್ನಾತಕೋತ್ತರ ಸೂಕ್ಷ್ಮಜೀವಶಾಸ್ತ್ರ ಅಧ್ಯಯನ ವಿಭಾಗ, ದಾವಿವಿ – ಇವರ ವೇತನ ಪಾವತಿ ಆದೇಶಕ್ಕೆ ಘಟನೋತ್ತರ ಅನುಮತಿ ನೀಡುವ ಕುರಿತು.**

1. ವಿಶೇಷ ಸಿಂಡಿಕೇಟ್ ಸಭೆಯ ನಿರ್ಣಯ ದಿನಾಂಕಃ 06.02.2025
2. ವಿಶ್ವವಿದ್ಯಾನಿಲಯದ ಅಧಿಕೃತ ಜ್ಞಾಪನ ಸಂಖ್ಯೆಃದಾವಿವಿ/ ಮಾಸನಿ/92/2024-25 /4163, ದಿನಾಂಕಃ 06.02.2025
3. ವಿಶ್ವವಿದ್ಯಾನಿಲಯದ ಆದೇಶ ಸಂಖ್ಯೆಃ ದಾವಿವಿ/ಮಾಸನಿ/92/ 2024-25/4410, ದಿನಾಂಕಃ 18.02.2025.

*********

ವಿಶ್ವವಿದ್ಯಾನಿಲಯದಲ್ಲಿ ದಿನಾಂಕಃ06.02.2025ರಂದು ನಡೆದ ವಿಶೇಷ ಸಿಂಡಿಕೇಟ್ ಸಭೆಯ ನಿರ್ಣಯದನುಸಾರ ಉಲ್ಲೇಖ (2)ರ ಅಧಿಕೃತ ಜ್ಞಾಪನದಲ್ಲಿ ಪ್ರೊ. ಗಾಯತ್ರಿ ದೇವರಾಜ, ಹಿರಿಯ ಪ್ರಾಧ್ಯಾಪಕರು (ಅಮಾನತು), ಸ್ನಾತಕೋತ್ತರ ಸೂಕ್ಷ್ಮಜೀವಶಾಸ್ತ್ರ ಅಧ್ಯಯನ ವಿಭಾಗ – ಇವರ ಸೇವೆಯನ್ನು ಕೆ.ಸಿ.ಎಸ್. (ಸಿಸಿಎ) ನಿಯಮಗಳು ನಿಯಮ 10 (2) (ಎ) ರನ್ವಯ ಮುಂದಿನ ಆದೇಶದವರೆಗೆ ಅಮಾನತ್ತಿನಲ್ಲಿಡಲಾಗಿದೆ.

ಮುಂದುವರೆದು, ಕೆ.ಸಿ.ಎಸ್. ನಿಯಮ 98(1)ರನ್ವಯ ಹಾಗೂ ಮಾನ್ಯ ಕುಲಪತಿಗಳ ಆದೇಶಾನುಸಾರ ಪ್ರೊ. ಗಾಯತ್ರಿ ದೇವರಾಜ, ಹಿರಿಯ ಪ್ರಾಧ್ಯಾಪಕರು (ಅಮಾನತು) ಇವರಿಗೆ ಅರ್ಧ ವೇತನ ಜೀವನಾಧರ ಭತ್ಯೆಯನ್ನು ಉಲ್ಲೇಖ (3)ರಲ್ಲಿ ಮಂಜೂರಾತಿ ನೀಡಲಾಗಿದೆ, ಸದರಿ ಮಂಜೂರಾತಿ ಆದೇಶ ನೀಡಿರುವ ಕುರಿತು ದಿನಾಂಕಃ18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಘಟನೋತ್ತರ ಅನುಮೋದನೆಗಾಗಿ ಮಂಡಿಸಿದೆ.

**:: ನಿರ್ಣಯ ::**

ಪ್ರೊ. ಗಾಯತ್ರಿ ದೇವರಾಜ, ಹಿರಿಯ ಪ್ರಾಧ್ಯಾಪಕರು (ಅಮಾನತು), ಸೂಕ್ಷ್ಮ ಜೀವಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ ಇವರಿಗೆ ಕೆ.ಸಿ.ಎಸ್. ನಿಯಮ 98 (1) ರನ್ವಯ ಅರ್ಧ ವೇತನ ಜೀವನಾಧಾರ ಭತ್ಯೆ ಮಂಜೂರಾತಿ ನೀಡಿರುವುದಕ್ಕೆ ಸಭೆಯು ಘಟನೋತ್ತರವಾಗಿ ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಮಾ.ಸ.ನಿ. ವಿಭಾಗ – 13 | |
|---|---|
| ವಿಷಯ ಸಂಖ್ಯೆ: | ಸಿಂ.02(c)/(03/25) |

# –: ಟಿಪ್ಪಣಿ :–

ವಿಷಯ: **ಡಾ. ಶಶಿಧರ ಡಿ, ಸಹಾಯಕ ಪ್ರಾಧ್ಯಾಪಕರು, ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ – ಇವರ ತಂದೆಯ ಅನಾರೋಗ್ಯದ ನಿಮಿತ್ತ ಚಿಕಿತ್ಸೆ ಮಾಡಿಸಿದ ವೈದ್ಯಕೀಯ ವೆಚ್ಚದ ಒಟ್ಟು ಮೊತ್ತ ರೂ.1,96,795/–ಗಳ ಮರುಭರಿಕೆ ಕುರಿತು.**

ಉಲ್ಲೇಖ:
1. ಡಾ. ನಾಗರಾಜು ಎನ್, ಸಹಾಯಕ ಪ್ರಾಧ್ಯಾಪಕರು ಇವರ ಪತ್ರ ಸಂಖ್ಯೆ:ದಾವಿವಿ/ರಾಜ್ಯಶಾಸ್ತ್ರ/77/2024–25, ದಿನಾಂಕ: 10.02.2025.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 07 ಯುಎಂವಿ 2025, ದಿನಾಂಕ: 14.02.2025.

*********

ಡಾ. ಶಶಿಧರ ಡಿ, ಸಹಾಯಕ ಪ್ರಾಧ್ಯಾಪಕರು, ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ – ಇವರು **ಕಸ್ತೂರಿ ಬಾ ಆಸ್ಪತ್ರೆ, ಮಣಿಪಾಲ** – ಇಲ್ಲಿ ತಮ್ಮ ತಂದೆಯ ಅನಾರೋಗ್ಯದ ನಿಮಿತ್ತ ಚಿಕಿತ್ಸೆ ಮಾಡಿಸಿದ ವೈದ್ಯಕೀಯ ವೆಚ್ಚದ ಒಟ್ಟು ಮೊತ್ತ ರೂ.3,12,000/–ಗಳ ಮೂಲ ಬಿಲ್ಲುಗಳನ್ನು ಸಲ್ಲಿಸಿ, ಮರುಭರಿಕೆ ಮಾಡುವಂತೆ ಉಲ್ಲೇಖ (1)ರ ಪತ್ರದಲ್ಲಿ ಕೋರಿರುತ್ತಾರೆ. ಈ ಕುರಿತು ವಿಶ್ವವಿದ್ಯಾನಿಲಯದ **ವೈದ್ಯಾಧಿಕಾರಿಗಳು ರೂ.1,96,795/– ಗಳ ಮರುಭರಿಕೆಗಾಗಿ ಶಿಫಾರಸ್ಸು ನೀಡಿರುತ್ತಾರೆ.**

ತತ್ಸಂಬಂಧ, ಕುಲಪತಿಗಳ ಆದೇಶಾನುಸರ ಡಾ. ಶಶಿಧರ ಡಿ, ಸಹಾಯಕ ಪ್ರಾಧ್ಯಾಪಕರು – ಇವರ ವೈದ್ಯಕೀಯ ವೆಚ್ಚದ **ಒಟ್ಟು ಮೊತ್ತ ರೂ.1,96,795/–ಗಳ** ಮರುಭರಿಕೆ ಪ್ರಸ್ತಾವನೆಯ ಕುರಿತು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ನಿರ್ಣಯಕ್ಕಾಗಿ ಸಲ್ಲಿಸಿದೆ.

## :: ನಿರ್ಣಯ ::

ಡಾ. ಶಶಿಧರ ಡಿ, ಸಹಾಯಕ ಪ್ರಾಧ್ಯಾಪಕರು, ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ – ಇವರು ತಮ್ಮ ತಂದೆಯ ಅನಾರೋಗ್ಯ ನಿಮಿತ್ತ **ಕಸ್ತೂರಿ ಬಾ ಆಸ್ಪತ್ರೆ, ಮಣಿಪಾಲ** ಇಲ್ಲಿ ಚಿಕಿತ್ಸೆ ಮಾಡಿಸಿದ ವೈದ್ಯಕೀಯ ವೆಚ್ಚಕ್ಕೆ ಸಂಬಂಧಪಟ್ಟಂತೆ ವಿಶ್ವವಿದ್ಯಾನಿಲಯದ ವೈದ್ಯಾಧಿಕಾರಿಗಳು ಶಿಫಾರಸ್ಸು ಮಾಡಿರುವ **ರೂ.1,96,795/–ಗಳನ್ನು** ಮರುಭರಿಕೆ ಮಾಡಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು                                        ಕುಲಪತಿಗಳು

| ಮಾ.ಸ.ನಿ. ವಿಭಾಗ – 14 | |
|---|---|
| ವಿಷಯ ಸಂಖ್ಯೆ: | ಸಿಂ.02(d)/(03/25) |

## –: ಟಿಪ್ಪಣಿ :–

**ವಿಷಯಃ ವಯೋನಿವೃತ್ತಿ ಹೊಂದಲಿರುವ ಅಧ್ಯಾಪಕ/ ಅಧ್ಯಾಪಕೇತರ ನೌಕರರುಗಳಿಗೆ ವಿಶ್ವವಿದ್ಯಾನಿಲಯದ ಕರ್ತವ್ಯದಿಂದ ಬಿಡುಗಡೆ ಮಾಡುವ ಕುರಿತು.**

*********

ವಿಶ್ವವಿದ್ಯಾನಿಲಯದ ಈ ಕೆಳಕಂಡ ಅಧ್ಯಾಪಕ/ ಅಧ್ಯಾಪಕೇತರ ನೌಕರರು ವಯೋನಿವೃತ್ತಿ ಹೊಂದಲಿರುವುದರಿಂದ, ಸದರಿಯವರನ್ನು ವಿಶ್ವವಿದ್ಯಾನಿಲಯದ ಕರ್ತವ್ಯದಿಂದ ಬಿಡುಗಡೆಗೊಳಿಸಲು ಹಾಗೂ ಸದರಿಯವರಿಗೆ ನಿಯಮಾನುಸಾರ ಲಭ್ಯವಿರುವ ಆರ್ಥಿಕ ಸೌಲಭ್ಯಗಳನ್ನು ಮಂಜೂರು ಮಾಡುವ ಸಂಬಂಧ ದಿನಾಂಕಃ18.03.2025 ರಂದು ನಡೆಯುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅನುಮೋದನೆಗಾಗಿ ಸಲ್ಲಿಸಿದೆ. ಸದರಿಯವರ ಸೇವಾ ವಿವರಗಳನ್ನು ಈ ಕೆಳಗೆ ನಮೂದಿಸಲಾಗಿದೆ.

| ಕ್ರ. ಸಂ. | ನೌಕರರ ಹೆಸರು ಹಾಗೂ ಹುದ್ದೆ | ಹುಟ್ಟಿದ ದಿನಾಂಕ | ಸೇವೆಗೆ ಸೇರಿದ ದಿನಾಂಕ | ನಿವೃತ್ತಿ ದಿನಾಂಕ | ಷರಾ |
|---|---|---|---|---|---|
| 1 | ಪ್ರೊ. ಸುಚಿತ್ರ ಎಸ್, ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗ. | 16.07.1963 | 19.02.1996 | 31.07.2025 | ಸದರಿಯವರ ವಿರುದ್ಧ ಯಾವುದೇ ಇಲಾಖೆ ವಿಚಾರಣೆಗಳು ಹಾಗೂ ನ್ಯಾಯಾಲಯದ ಮೊಕದಮ್ಮೆಗಳು ದಾಖಲಾಗಿರುವುದಿಲ್ಲ. |
| 2 | ಶ್ರೀ ಚಮನ್ ಸಾಬ್ ಅಧೀಕ್ಷಕರು, ಹಣಕಾಸು ವಿಭಾಗ | 14.05.1965 | 19.01.2006 | 31.05.2025 | |

### :: ನಿರ್ಣಯ ::

ವಿಶ್ವವಿದ್ಯಾನಿಲಯದ ಈ ಮೇಲ್ಕಂಡ ಅಧ್ಯಾಪಕ/ ಅಧ್ಯಾಪಕೇತರ ನೌಕರರು ವಯೋನಿವೃತ್ತಿ ಹೊಂದಲಿರುವುದರಿಂದ ಸದರಿಯವರನ್ನು ವಿಶ್ವವಿದ್ಯಾನಿಲಯದ ಕರ್ತವ್ಯದಿಂದ ಬಿಡುಗಡೆಗೊಳಿಸಲು ಹಾಗೂ ಸದರಿಯವರಿಗೆ ನಿಯಮಾನುಸಾರ ಲಭ್ಯವಿರುವ ಆರ್ಥಿಕ ಸೌಲಭ್ಯಗಳನ್ನು ಮಂಜೂರು ಮಾಡಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು                ಕುಲಪತಿಗಳು

| ಮಾ.ಸ.ನಿ. ವಿಭಾಗ – 15 | |
|---|---|
| ವಿಷಯ ಸಂಖ್ಯೆ: | ಸಿಂ.02(e)/(03/25 |

## –: ಟಿಪ್ಪಣಿ :–

**ವಿಷಯ:** **ವಿಶ್ವವಿದ್ಯಾನಿಲಯದ ಯು.ಜಿ.ಸಿ.–ಸಿಎಎಸ್ ನಿಯಮದಡಿ ಸಹಾಯಕ ಪ್ರಾಧ್ಯಾಪಕ/ ಪ್ರಾಧ್ಯಾಪಕರ ವೃತ್ತಿ ಪದೋನ್ನತಿ (CAS) ನೀಡುವ ಕುರಿತು.**

ಉಲ್ಲೇಖ: 1. ದಿನಾಂಕ:21.01.2025ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ.
2. ವಿ.ವಿ. ಪತ್ರ ಸಂಖ್ಯೆ: ದಾವಿವಿ/ಮಾಸನಿ/679/2024–25/ 4207, ದಿನಾಂಕ: 10.02.2025

*********

ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕ ಹುದ್ದೆಯ Academic Level 13(A) ರಿಂದ Academic Level 14ಕ್ಕೆ ಹಾಗೂ ಸಹಾಯಕ ಪ್ರಾಧ್ಯಾಪಕ ಹುದ್ದೆಯ Academic Level 10 ರಿಂದ Academic Level 11 ಕ್ಕೆ ವೃತ್ತಿ ಪದೋನ್ನತಿ ನೀಡುವ ಸಂಬಂಧ ದಿನಾಂಕ:21.01.2025ರಂದು ನಡೆದ ಸಿಂಡಿಕೇಟ್ ಸಭೆಯಲ್ಲಿ ಕೈಗೊಂಡ ನಿರ್ಣಯದನುಸಾರ ಕ್ರಮಕೈಗೊಳ್ಳಲು ನಿರ್ದೇಶಕರು, ಐ.ಕ್ಯೂ.ಎ.ಸಿ. ವಿಭಾಗ, ದಾವಿವಿ ಇವರಿಗೆ ಉಲ್ಲೇಖ (2)ರ ಪತ್ರದಲ್ಲಿ ಪತ್ರಿಸಲಾಗಿತ್ತು.

ಮುಂದುವರೆದು, ಸದರಿ ಪತ್ರದನುಸಾರ ನಿರ್ದೇಶಕರು, ಐ.ಕ್ಯೂ.ಎ.ಸಿ. ವಿಭಾಗ, ದಾವಿವಿ ಇವರು ಸಹಾಯಕ ಪ್ರಾಧ್ಯಾಪಕ/ಪ್ರಾಧ್ಯಾಪಕ ಹುದ್ದೆಯ ವೃತ್ತಿ ಪದೋನ್ನತಿ ನೀಡುವ ಸಂಬಂಧ ಸಲ್ಲಿಸಿದ ದಾಖಲಾತಿಗಳನ್ನು ದಿನಾಂಕ:18.03.2025 ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆ ಹಾಗೂ ಅನುಮೋದನೆಗಾಗಿ ಸಲ್ಲಿಸಿದೆ.

**:: ನಿರ್ಣಯ ::**

**"Table-A"**

| UGC CAS 2023 Scrutiny Completed Candidate Details<br>Professor (Level 13 A to Level 14) | | | | |
|---|---|---|---|---|
| **Sl No.** | **Date** | **Name** | **Department** | **Designation** |
| 01 | 01.06.2022 | Dr. K.M. Eshwarappa | Physics | Professor |
| 02 | 24.09.2024 | Dr. Kotresha D | Botany | Professor |
| 03 | 30.10.2024 | Dr. Ashok Kumar V. Paled | Political Science | Professor |
| 04 | 22.11.2024 | Dr. Niranjan M.H. | Biotechnology | Professor |
| 05 | 30.08.2019 | Dr. Pradeep B.S. | MSW | Associate Professor |
| 06 | 17.06.2024 | | | Professor |

ಪು.ತಿ.ನೋ..

ಕುಲಸಚಿವರು

ಕುಲಪತಿಗಳು

**"Table-B"**

| Assistant Professor (Level 10 to Level 11) | | | | |
|---|---|---|---|---|
| 01 | 08.03.2024 | Dr. Yagnasri S. | English | Assistant Professor |
| 02 | 18.07.2024 | Mr. Madakari Nayaka H.R. | | Assistant Professor |
| 03 | 30.07.2024 | Dr. Fakkiresh Hallalli | | Assistant Professor |
| 04 | 24.03.2023 | Dr. Chandralekha J.S. | Journalism | Assistant Professor |
| 05 | 01.09.2023 | Dr. Girish D.H. | Economics | Assistant Professor |
| 06 | 01.03.2024 | Dr. Sundram M. | | Assistant Professor |
| 07 | 30.07.2024 | Dr. Usha | Commerce | Assistant Professor |
| 08 | 06.03.2024 | Dr. Chetan Kumar K.M. | Education | Assistant Professor |
| 09 | 14.08.2024 | Dr. Anup Ritti | Computer Science | Assistant Professor |

ಈ ಮೇಲ್ಕಂಡ ಪ್ರಾಧ್ಯಾಪಕ/ ಸಹಾಯಕ ಪ್ರಾಧ್ಯಾಪಕರ ವೃತ್ತಿ ಪದೋನ್ನತಿಗೆ (CAS) ಸಂಬಂಧಪಟ್ಟಂತೆ Excel Sheet ನಲ್ಲಿ ಸಿದ್ಧಪಡಿಸಿದ ಮಾಹಿತಿಯನ್ನು ಹಾಗೂ ಮಾನ್ಯ ಕುಲಪತಿಗಳು ನೀಡಿದ ಸಂಪೂರ್ಣ ವಿವರಣೆಯನ್ನು ಸಭೆಯು ಕೂಲಂಕುಶವಾಗಿ ಪರಿಶೀಲಿಸಿದ ನಂತರ **Table-A** ನಲ್ಲಿರುವ ಪ್ರಾಧ್ಯಾಪಕರಿಗೆ Academic Level 13(A) ರಿಂದ Academic Level 14ಕ್ಕೆ ವೃತ್ತಿ ಪದೋನ್ನತಿ ನೀಡಲು ಹಾಗೂ **Table-B** ನಲ್ಲಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ Academic Level 10 ರಿಂದ Academic Level 11 ಕ್ಕೆ ವೃತ್ತಿ ಪದೋನ್ನತಿ ನೀಡಲು ಸಭೆಯು ಒಮ್ಮತದಿಂದ ನಿರ್ಣಯಿಸಿ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಹಣಕಾಸು ವಿಭಾಗ – 16 | |
|---|---|
| ವಿಷಯ ಸಂಖ್ಯೆ: | ಸಿಂ.03(a)/(03/25) |

## –: ಟಿಪ್ಪಣಿ :–

**ವಿಷಯ: 2024–25ನೇ ಸಾಲಿನ ಮೂರನೇ ಹಣಕಾಸು ಸಮಿತಿ ಸಭೆಯ ನಡಾವಳಿಗಳಿಗೆ ಅನುಮೋದನೆ ನೀಡುವ ಕುರಿತು.**

*********

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು – ಇಲ್ಲಿ ದಿನಾಂಕ:27.01.2025 ರಂದು ಜರುಗಿದ ವಿಶ್ವವಿದ್ಯಾನಿಲಯದ 2024–25ನೇ ಆರ್ಥಿಕ ವರ್ಷದ **ಮೂರನೇ ಹಣಕಾಸು ಸಮಿತಿ** ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಯಗಳ ನಡಾವಳಿಗಳನ್ನು ದಿನಾಂಕ:18.03.2025ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆಗಾಗಿ ಹಾಗೂ ಅನುಮೋದನೆಗಾಗಿ ಮಂಡಿಸಲಾಗಿದೆ.

### :: ನಿರ್ಣಯ ::

ವಿಶ್ವವಿದ್ಯಾನಿಲಯದ 2024–25ನೇ ಆರ್ಥಿಕ ವರ್ಷದ **ಮೂರನೇ ಹಣಕಾಸು ಸಮಿತಿ** ಸಭೆಯ ನಡಾವಳಿಗಳ ಕುರಿತು ಚರ್ಚಿಸಿದ ನಂತರ ಸಭೆಯು ಒಮ್ಮತದಿಂದ ನಡಾವಳಿಗಳನ್ನು ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಹಣಕಾಸು ವಿಭಾಗ – 17 | |
|---|---|
| ವಿಷಯ ಸಂಖ್ಯೆ: | ಸಿಂ.03(b)/(03/25 |

## –: ಟಿಪ್ಪಣಿ :–

**ವಿಷಯ: ವಿಶ್ವವಿದ್ಯಾನಿಲಯದ 2025–26ನೇ ಸಾಲಿನ ಆಂತರಿಕ ಆಯ–ವ್ಯಯ ಅನುಮೋದನೆ ಕುರಿತು.**

*********

ವಿಶ್ವವಿದ್ಯಾನಿಲಯದ 2025–26ನೇ ಸಾಲಿನ ವಿವಿಧ ಶೀರ್ಷಿಕೆಯಡಿ ವೆಚ್ಚ ಭರಿಸುವುದಕ್ಕಾಗಿ ಆಂತರಿಕ ಆಯ–ವ್ಯಯವನ್ನು ಸಿದ್ದಪಡಿಸಲಾಗಿದ್ದು ದಿನಾಂಕ:18.03.2025 ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆ ಹಾಗೂ ಅನುಮೋದನೆಗಾಗಿ ಸಲ್ಲಿಸಿದೆ.

**ವಿವರಣೆ:**

- 2025–26ನೇ ಸಾಲಿನ ವಿವಿಧ ಶೀರ್ಷಿಕೆಯಡಿ ವೆಚ್ಚ ಭರಿಸುವುದಕ್ಕಾಗಿ ಆಂತರಿಕ ಆಯ–ವ್ಯಯದ ಸಂಪೂರ್ಣ ಮಾಹಿತಿಯನ್ನು ಹಣಕಾಸು ಅಧಿಕಾರಿಗಳು ಸಭೆಗೆ ವಿವರಿಸಿದರು.
- ಶ್ರೀ ತಿಪ್ಪೇಸ್ವಾಮಿ ಹೆಚ್, ಮಾನ್ಯ ಸಿಂಡಿಕೇಟ್ ಸದಸ್ಯರು ಇವರು SEP/TSP ಅನುದಾನಕ್ಕೆ ಸಂಬಂಧಿಸಿದಂತೆ ಸಂಶೋಧನಾ ವಿದ್ಯಾರ್ಥಿಗಳಿಗೆ ಶಿಷ್ಯವೇತನವನ್ನು ನೀಡುವ ಕುರಿತು ಮಾಹಿತಿ ಕೋರಿದರು.
  ಮಾನ್ಯ ಕುಲಪತಿಗಳು ಸುಮಾರು 60 ರಿಂದ 70 ಸಂಶೋಧನಾ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ರೂ.10,000/– ರಂತೆ ಶಿಷ್ಯವೇತನವನ್ನು ನೀಡುತ್ತಿರುವುದಾಗಿ ಸಭೆಗೆ ತಿಳಿಸಿದರು.
- ಶ್ರೀ ದ್ಯಾಮಪ್ಪ, ಮಾನ್ಯ ಸಿಂಡಿಕೇಟ್ ಸದಸ್ಯರು ಇವರು ಬೋಧನಾ, ಸಂಶೋಧನಾ ಮತ್ತು ವಿಸ್ತರಣಾ ಚಟುವಟಿಕೆಗಳನ್ನು ಬಗ್ಗೆ ಮಾಹಿತಿ ಕೋರಿದರು.
  ಈ ಕುರಿತು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿಗಳು ಬೋಧನೆ ಮತ್ತು ವಿಸ್ತರಣೆಗಾಗಿ ಯು.ಜಿ.ಸಿ. ಮಾರ್ಗಸೂಚಿಗಳನುಸಾರ ಆಂತರಿಕ ಸಂಪನ್ಮೂಲದಿಂದ ಶೇಕಡ 7% ವೆಚ್ಚವನ್ನು ಭರಿಸಲು ನಿಗಧಿಪಡಿಸಲಾಗಿರುವ ಬಗ್ಗೆ ಸಭೆಗೆ ಮಾಹಿತಿ ನೀಡಿದರು.
- ಡಾ. ಬಿ.ಎನ್. ಉಮೇಶ್, ಮಾನ್ಯ ಸಿಂಡಿಕೇಟ್ ಸದಸ್ಯರು ಇವರು ವಿಭಾಗಗಳಿಗೆ ಎಷ್ಟು ಮೊತ್ತವನ್ನು ನೀಡಲಾಗುತ್ತಿದೆ ಎಂಬ ಮಾಹಿತಿಯನ್ನು ಕೋರಿದರು.
  ಈ ಕುರಿತು ಮಾನ್ಯ ಕುಲಪತಿಗಳು ವಿಭಾಗವಾರು ಶೀರ್ಷಿಕೆವಾರು ವೆಚ್ಚಕ್ಕಾಗಿ ನಿಗದಿಪಡಿಸಲಾಗಿರುತ್ತದೆ. ಅದರಂತೆ ವೆಚ್ಚವನ್ನು ಭರಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

**:: ನಿರ್ಣಯ ::**

ವಿಶ್ವವಿದ್ಯಾನಿಲಯದ 2025–26ನೇ ಸಾಲಿನ ವಿವಿಧ ಶೀರ್ಷಿಕೆಯಡಿ ವೆಚ್ಚ ಭರಿಸುವುದಕ್ಕಾಗಿ ಸಿದ್ದಪಡಿಸಲಾದ ಆಂತರಿಕ ಆಯ–ವ್ಯಯ ಕುರಿತು ಸಭೆಯು ಸುಧೀರ್ಘವಾಗಿ ಚರ್ಚಿಸಿದ ಬಳಿಕ ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಸಂಶೋಧನಾ ಮತ್ತು ಅಭಿವೃದ್ಧಿ ಕೋಶ – 18 | |
|---|---|
| ವಿಷಯ ಸಂಖ್ಯೆ: | ಸಿಂ.04(a)/(03/25) |

## –ಃ ಟಿಪ್ಪಣಿ ಃ–

**ವಿಷಯಃ ಡಾ. ಫಕ್ಕಿರೇಶ ಹಳ್ಳಳ್ಳಿ, ಸಹಾಯಕ ಪ್ರಾಧ್ಯಾಪಕರು, ಇಂಗ್ಲೀಷ್ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ ಇವರಿಗೆ ಸಂಶೋಧನಾ ಮಾರ್ಗದರ್ಶಕರಾಗಿ ಮಾನ್ಯತೆ ನೀಡಿರುವುದಕ್ಕೆ ಘಟನೋತ್ತರ ಅನುಮೋದನೆ ನೀಡುವ ಕುರಿತು.**

*********

ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಇಂಗ್ಲೀಷ್ ಅಧ್ಯಯನ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾದ **ಡಾ. ಫಕ್ಕಿರೇಶ ಹಳ್ಳಳ್ಳಿ,** ಇವರು ಪಿಹೆಚ್.ಡಿ. ಪದವಿಯನ್ನು ಪಡೆದುಕೊಂಡು ತಮ್ಮನ್ನು ಸಂಶೋಧನಾ ಮಾರ್ಗದರ್ಶಕರನ್ನಾಗಿ ಮಾನ್ಯತೆ ನೀಡುವಂತೆ ವಿಶ್ವವಿದ್ಯಾನಿಲಯದ ನಿಯಮಾನುಸಾರ ಮನವಿ ಸಲ್ಲಿಸಿದ್ದರ ಹಿನ್ನೆಲೆಯಲ್ಲಿ ಮಾನ್ಯ ಕುಲಪತಿಗಳ ಅನುಮೋದನೆಯಂತೆ 2024–25ನೇ ಸಾಲಿನಿಂದ ಇವರನ್ನು ಸಂಶೋಧನಾ ಮಾರ್ಗದರ್ಶಕರನ್ನಾಗಿ ಮಾನ್ಯತೆ ನೀಡಿರುವ ಕುರಿತು ದಿನಾಂಕ:18.03.2025 ರಂದು ಏರ್ಪಡಿಸಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಘಟನೋತ್ತರ ಅನುಮೋದನೆಗಾಗಿ ಸಲ್ಲಿಸಿದೆ.

:: ನಿರ್ಣಯ ::

ದಾವಣಗೆರೆ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಇಂಗ್ಲೀಷ್ ಅಧ್ಯಯನ ವಿಭಾಗದಲ್ಲಿ ಸಂಶೋಧನೆಯನ್ನು ಮುಂದುವರೆಸಲು ಅನುಕೂಲವಾಗುವಂತೆ ಡಾಕ್ಟರೇಟ್ (ಪಿ.ಹೆಚ್.ಡಿ) ಪದವಿ ಪಡೆದಿರುವ ವಿಶ್ವವಿದ್ಯಾನಿಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಫಕ್ಕಿರೇಶ ಹಳ್ಳಳ್ಳಿ, ಸ್ನಾತಕೋತ್ತರ ಇಂಗ್ಲೀಷ್ ಅಧ್ಯಯನ ವಿಭಾಗ ಇವರನ್ನು ಸಂಶೋಧನಾ ಮಾರ್ಗದರ್ಶಕರನ್ನಾಗಿ ಮಾನ್ಯತೆ ನೀಡಿರುವುದಕ್ಕೆ ಸಭೆಯು ಘಟನೋತ್ತರವಾಗಿ ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು　　　　　　　　ಕುಲಪತಿಗಳು

| ಅಭಿವೃದ್ಧಿ ವಿಭಾಗ – 19 | |
|---|---|
| ವಿಷಯ ಸಂಖ್ಯೆ: | ಸಿಂ.05(a)/(03/25) |

## –: ಟಿಪ್ಪಣಿ :–

**ವಿಷಯ: ಇ–ಟೆಂಡರ್ ಪ್ರಕ್ರಿಯೆ ಮುಖಾಂತರ ಪ್ರಯೋಗಾಲಯದ ಉಪಕರಣಗಳನ್ನು ಖರೀದಿಸಲು ಅನುಮತಿ ನೀಡುವ ಬಗ್ಗೆ.**

*********

ಮೇಲ್ಕಂಡ ವಿಷಯಕ್ಕೆ ಸಂಬಧಿಸಿದಂತೆ, ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಪರಾದಶಾಸ್ತ್ರ ಮತ್ತು ವಿಧಿವಿಜ್ಞಾನ ವಿಭಾಗದಲ್ಲಿ ನೂತನ ಪ್ರಯೋಗಾಲಯವನ್ನು ನಿರ್ಮಿಸಿಕೊಡಲು ದಿನಾಂಕ:03.10.2024 ರ ಸಿಂಡಿಕೇಟ್ ಸಭೆಯಲ್ಲಿ ಅಂದಾಜು ಮೊತ್ತ ರೂ.10.00 ಲಕ್ಷಗಳನ್ನು ಮಂಜೂರು ಮಾಡಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರಯೋಗಾಲಯಕ್ಕೆ ಇ–ಟೆಂಡರ್ ಪ್ರಕ್ರಿಯೆ ಮೂಲಕ ಉಪಕರಣಗಳನ್ನು ಖರೀದಿಸುವ ಬಗ್ಗೆ ದಿನಾಂಕ:18.03.2025ರಂದು ನಡೆಯುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ನಿರ್ಣಯಕ್ಕಾಗಿ ಮಂಡಿಸಲಾಗಿದೆ.

**:: ನಿರ್ಣಯ ::**

ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಪರಾಧಶಾಸ್ತ್ರ ಮತ್ತು ವಿಧಿವಿಜ್ಞಾನ ವಿಭಾಗದ ನೂತನ ಪ್ರಯೋಗಾಲಯಕ್ಕೆ ಕೆಮಿಕಲ್ಸ್‌ಗೆ ರೂ.5.00 ಲಕ್ಷ ಹಾಗೂ ಇಕ್ವಿಪ್‌ಮೆಂಟ್ಸ್‌ಗೆ ರೂ.5.00 ಮಿತಿಯೊಳಗೆ (Chemical and Equipments) ಬೇರೆ ಬೇರೆಯಾಗಿ ದರಪಟ್ಟಿ ಆದಾರದ ಮೇಲೆ ನಿಯಮಾನುಸಾರ ಖರೀದಿಸಲು ಸಭೆಯು ಒಮ್ಮತದಿಂದ ಅನುಮೋದನೆ ನೀಡಿತು.

ಕುಲಸಚಿವರು                ಕುಲಪತಿಗಳು

| ಅಭಿವೃದ್ಧಿ ವಿಭಾಗ – 20 | |
|---|---|
| ವಿಷಯ ಸಂಖ್ಯೆ: | ಸಿಂ.05(b)/(03/25) |

## –: ಟಿಪ್ಪಣಿ :–

ವಿಷಯ: ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಗಳಿಗೆ ಹಾಗೂ ದೃಶ್ಯಕಲಾ ಮಹಾವಿದ್ಯಾಲಯ ದಾವಣಗೆರೆ ವಸತಿ ನಿಲಯಗಳಿಗೆ ಬೇಡಿಕೆಗನುಗುಣವಾಗಿ ಪೀಠೋಪಕರಣಗಳ ಖರೀದಿಸಲು ಅನುಮತಿ ನೀಡುವ ಬಗ್ಗೆ.

*********

ಮೇಲ್ಕಂಡ ವಿಷಯಕ್ಕೆ ಸಂಬಧಿಸಿದಂತೆ, ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಗಳಿಗೆ ಹಾಗೂ ದೃಶ್ಯಕಲಾ ಮಹಾವಿದ್ಯಾಲಯ, ದಾವಣಗೆರೆ ವಸತಿ ನಿಲಯಗಳಿಗೆ ಬೇಡಿಕೆಗನುಗುಣವಾಗಿ ಈ ಕೆಳಕಂಡ ಪೀಠೋಪಕರಣಗಳನ್ನು 2024–25ನೇ ಸಾಲಿನ ಇ–ಟೆಂಡರ್‌ನಲ್ಲಿ ಆಯ್ಕೆಯಾಗಿರುವ **M/s ನಂದಿ ಟೆಕ್ನಾಲಜಿ, ದಾವಣಗೆರೆ** ಇವರಿಂದ ಖರೀದಿಸಲು ದಿನಾಂಕ:18.03.2025ರ ಸಿಂಡಿಕೇಟ್ ಸಾಮಾನ್ಯ ಸಭೆಯು ಅವಗಾಹನೆಗೆ ಹಾಗೂ ಅನುಮೋದನೆಗಾಗಿ ಮಂಡಿಸಲಾಗಿದೆ.

| Sl.No | Particulars | Quantity |
|---|---|---|
| 01 | Double Bunker Cot<br>(ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಗಳಿಗೆ) | 53 |
| 02 | Double Bunker Cot<br>(ದೃಶ್ಯಕಲಾ ಮಹಾವಿದ್ಯಾಲಯ ದಾವಣಗೆರೆ) | 40 |
| | ಒಟ್ಟು | **93** |

### :: ನಿರ್ಣಯ ::

ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಗಳಿಗೆ ಹಾಗೂ ದೃಶ್ಯಕಲಾ ಮಹಾವಿದ್ಯಾಲಯಕ್ಕೆ ಈ ಮೇಲ್ಕಂಡ ಪೀಠೋಪಕರಣಗಳನ್ನು ಇ–ಟೆಂಡರ್‌ನಲ್ಲಿ ಆಯ್ಕೆಯಾಗಿರುವ M/s ನಂದಿ ಟೆಕ್ನಾಲಜಿ, ದಾವಣಗೆರೆ ಇವರಿಂದ ನಿಯಮಾನುಸಾರ ಖರೀದಿಸಲು ಸಭೆಯು ಒಮ್ಮತದಿಂದ ಅನುಮೋದನೆ ನೀಡಿತು.

ಕುಲಸಚಿವರು                ಕುಲಪತಿಗಳು

| ಅಭಿವೃದ್ಧಿ ವಿಭಾಗ – 21 | |
|---|---|
| ವಿಷಯ ಸಂಖ್ಯೆ: | ಸಿಂ.05(c)/(03/25) |

## –: ಟಿಪ್ಪಣಿ :–

**ವಿಷಯ: ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿಗಳ ಪ್ರಾಯೋಗಿಕ ಕಲಿಕೆಗೆ ಅಗತ್ಯವಿರುವ 01 ವಿಡಿಯೋ ಮತ್ತು 02 ಫೋಟೋ ಕ್ಯಾಮರಾ ಖರೀದಿಸುವ ಬಗ್ಗೆ.**

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿಗಳ ಪ್ರಾಯೋಗಿಕ ಕಲಿಕೆಗೆ ಅಗತ್ಯವಿರುವ 01 ವಿಡಿಯೋ ಕ್ಯಾಮರಾ ಮತ್ತು 02 ಫೋಟೋ ಕ್ಯಾಮರಾ ಖರೀದಿಸಲು ಅನುಮೋದನೆಗಾಗಿ ದಿನಾಂಕ:07.10.2023ರ ಸಿಂಡಿಕೇಟ್ ಸಭೆಯಲ್ಲಿ ಮಂಡಿಸಲಾಗಿತ್ತು. ಸದರಿ ಸಭೆಯಲ್ಲಿ 01 ವಿಡಿಯೋ ಕ್ಯಾಮರಾ ಮತ್ತು 02 ಫೋಟೋ ಕ್ಯಾಮರಾ ಖರೀದಿಸಲು ಅಂದಾಜು ಮೊತ್ತ ರೂ.2.00 ಲಕ್ಷದಲ್ಲಿ ನಿಯಮಾನುಸಾರ ದರಪಟ್ಟಿ ಕರೆದು ಖರೀದಿಸಲು ಸಭೆಯು ಅನುಮೋದಿಸಿರುತ್ತದೆ.

ಆದರೆ, ಅಧ್ಯಕ್ಷರು, ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ ಇವರು ಕೋರಿರುವಂತೆ ಉತ್ತಮ ಗುಣಮಟ್ಟದ ಒಂದು ಸಂಪೂರ್ಣ ವಿಡಿಯೋ ಮತ್ತು ಫೋಟೋ ಕ್ಯಾಮರಾಗಳ ಬೆಲೆ ಪ್ರಸ್ತುತ ದಿನಗಳಲ್ಲಿ ಅಧಿಕವಾಗಿರುವುದರಿಂದ ಅವುಗಳನ್ನು ಖರೀದಿಸಲು ಅಂದಾಜು ಮೊತ್ತ ರೂ.10.00 ಲಕ್ಷಗಳ ಅವಶ್ಯವಿರುತ್ತದೆಂದು ಕೋರಿರುತ್ತಾರೆ. ಆದ್ದರಿಂದ, ಉತ್ತಮವಾದ ವಿಡಿಯೋ ಮತ್ತು ಫೋಟೋ ಕ್ಯಾಮರಾಗಳನ್ನು ಖರೀದಿಸಲು ಅಂದಾಜು ಮೊತ್ತ ರೂ.10.00 ಲಕ್ಷಗಳ ಅನುಮೋದನೆಗಾಗಿ ದಿನಾಂಕ:18.03.2025 ರಂದು ನಡೆಯುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗಾಗಿ ಮಂಡಿಸಲಾಗಿದೆ.

### :: ನಿರ್ಣಯ ::

ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗಕ್ಕೆ ಉತ್ತಮ ಗುಣಮಟ್ಟದ 01 ಸಂಪೂರ್ಣ ವಿಡಿಯೋ ಮತ್ತು 02 ಫೋಟೋ ಕ್ಯಾಮರಾಗಳನ್ನು ಹಾಗೂ ಇತರೆ ಸಾಮಗ್ರಿಗಳನ್ನು ರೂ.5.00 ಲಕ್ಷದ ಮಿತಿಯೊಳಗೆ ದರಪಟ್ಟಿ ಆಧಾರದ ಮೇಲೆ ನಿಯಮಾನುಸಾರ ಖರೀದಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು　　　　　　　　ಕುಲಪತಿಗಳು

| ಶೈಕ್ಷಣಿಕ ವಿಭಾಗ – 22 | |
|---|---|
| ವಿಷಯ ಸಂಖ್ಯೆ: | ಸಿಂ.06(a)/(03/25) |

## –ಃ ಟಿಪ್ಪಣಿ ಃ–

ವಿಷಯಃ **2022–23ನೇ ಶೈಕ್ಷಣಿಕ ಸಾಲಿನಲ್ಲಿ ಕಾಲೇಜುಗಳಲ್ಲಿ ಎಂ.ಬಿ.ಎ. ಪದವಿಗೆ PGCET ಮುಖಾಂತರ ಪ್ರವೇಶ ಪಡೆದ ವಿದ್ಯಾರ್ಥಿಗಳ ಶುಲ್ಕ ಹಿಂಪಾವತಿಸುವ ಬಗ್ಗೆ.**

ಉಲ್ಲೇಖ:
1. ಕಛೇರಿ ಸುತ್ತೋಲೆ ಪತ್ರ ಸಂಖ್ಯೆ: ದಾವಿವಿ/ಶೈ/184/2022–23/4259 ದಿನಾಂಕ:19.01.2023.
2. ಕಾರ್ಯನಿರ್ವಾಹಕ ನಿರ್ದೇಶಕರು, ಕೆ.ಇ.ಎ. ಬೆಂಗಳೂರು ಇವರ ಪತ್ರಸಂಖ್ಯೆ:ಇಡಿ/ಕೆ.ಇ.ಎ./ಲೆಶಾ/ಸಿಆರ್/13/2022–23, ದಿ:14.03.2024.
3. ಪ್ರಾಂಶುಪಾಲರು, ಬಾಪೂಜಿ ಅಕಾಡೆಮಿ ಆಫ್ ರಿಸರ್ಚ್ ಮ್ಯಾನೇಜ್‌ಮೆಂಟ್ ದಾವಣಗೆರೆ ಇವರ ಪತ್ರ ಸಂಖ್ಯೆ:ಬಿಎಎಂಆರ್/ ಎಂ.ಬಿ.ಎ./111/2023–24 ದಿನಾಂಕ:26.02.2024.

*********

ವಿಶ್ವವಿದ್ಯಾನಿಲಯದ ವ್ಯಾಪ್ತಿಯೊಳಗೆ ಬರುವ ಎಂ.ಬಿ.ಎ. ಕಾಲೇಜುಗಳಲ್ಲಿ 2022–23ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕಾದ ಪ್ರಥಮ/ದ್ವಿತೀಯ ವರ್ಷದ ಶುಲ್ಕವನ್ನು ಉಲ್ಲೇಖ(1)ರ ಪತ್ರದಲ್ಲಿ ನಿಗದಿಪಡಿಸಿ ಸುತ್ತೋಲೆಯ ಮುಖಾಂತರ ಕ್ರಮಕ್ಕಾಗಿ ವಿವಿಧ ಕಾಲೇಜುಗಳಿಗೆ ಕಳುಹಿಸಲಾಗಿದೆ.

ಬಾಪೂಜಿ ಎಂ.ಬಿ.ಎ. ಕಾಲೇಜು ದಾವಣಗೆರೆ– ಇಲ್ಲಿ 2022–23ನೇ ಸಾಲಿನಲ್ಲಿ ಪ್ರಥಮ ವರ್ಷಕ್ಕೆ ಪಿ.ಜಿ.ಸಿ.ಇ.ಟಿ. ಮುಖಾಂತರ ಪ್ರವೇಶ ಪಡೆದ 22 ವಿದ್ಯಾರ್ಥಿಗಳ ಶುಲ್ಕ ರೂ.2,34,520–00/–ಗಳನ್ನು ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ಕೆ.ಇ.ಎ., ಬೆಂಗಳೂರು ಇವರು ಉಲ್ಲೇಖ(2)ರ ಪತ್ರದೊಂದಿಗೆ ವರ್ಗಾಯಿಸಿರುತ್ತಾರೆ.

ಪ್ರಾಂಶುಪಾಲರು, ಬಾಪೂಜಿ ಅಕಾಡೆಮಿ ಆಫ್ ರಿಸರ್ಚ್ ಮ್ಯಾನೇಜ್‌ಮೆಂಟ್ ಕಾಲೇಜು, ದಾವಣಗೆರೆ ಇವರು 2022–23ನೇ ಸಾಲಿನಲ್ಲಿ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕವನ್ನು ಪ್ರಸ್ತುತ ಸಾಲಿನಲ್ಲಿಯೇ ಪೂರ್ಣವಾಗಿ ಪಾವತಿಸಿರುವುದರಿಂದ ಕೆ.ಇ.ಎ. ಕಛೇರಿಯಿಂದ ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆ ಮಾಡಿದ ಮೊತ್ತ ರೂ.2,34,520/–ಗಳನ್ನು ಸದರಿ ಕಾಲೇಜಿಗೆ ಹಿಂಪಾವತಿಸುವಂತೆ ಉಲ್ಲೇಖ(3)ರ ಪತ್ರದಲ್ಲಿ ಕೋರಿರುತ್ತಾರೆ. ಸದರಿ ಮೊತ್ತವನ್ನು ಕಾಲೇಜಿಗೆ ಹಿಂಪಾವತಿಸುವ ಬಗ್ಗೆ ದಿನಾಂಕ:18.03.2025ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗೆ ಸಲ್ಲಿಸಿದೆ.

### :: ನಿರ್ಣಯ ::

ಬಾಪೂಜಿ ಅಕಾಡೆಮಿ ಆಫ್ ರಿಸರ್ಚ್ ಮ್ಯಾನೇಜ್‌ಮೆಂಟ್ ಕಾಲೇಜು, ದಾವಣಗೆರೆ ಇವರು 2022–23ನೇ ಸಾಲಿನಲ್ಲಿ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕವನ್ನು ಪ್ರಸ್ತುತ ಸಾಲಿನಲ್ಲಿಯೇ ಪೂರ್ಣವಾಗಿ ಪಾವತಿಸಿರುವುದರಿಂದ ಕೆ.ಇ.ಎ. ಕಛೇರಿಯಿಂದ ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆ ಮಾಡಿದ ಮೊತ್ತ ರೂ.2,34,520/–ಗಳನ್ನು ಸದರಿ ಕಾಲೇಜಿಗೆ ಹಿಂಪಾವತಿಸಲು ಸಭೆಯು ಒಮ್ಮತದಿಂದ ನಿರ್ಣಯಿಸಿ ಮುಂದಿನ ಕ್ರಮಕ್ಕಾಗಿ ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಿತು.

ಕುಲಸಚಿವರು | ಕುಲಪತಿಗಳು

| ಶೈಕ್ಷಣಿಕ ವಿಭಾಗ – 23 | |
|---|---|
| ವಿಷಯ ಸಂಖ್ಯೆ: | ಸಿಂ.06(b)/(03/25) |

## –: ಟಿಪ್ಪಣಿ :–

ವಿಷಯಃ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪದವಿಯ **Bio-technology,** ವಿಷಯದಲ್ಲಿ ಅತೀ ಹೆಚ್ಚು ಅಂಕ ಪಡೆದು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗೆ ಸ್ವರ್ಣ ಪದಕವನ್ನು ಸ್ಥಾಪನೆ ಮಾಡುವ ಪ್ರಸ್ತಾವನೆಯನ್ನು ಸಿಂಡಿಕೇಟ್ ಸಭೆಯಲ್ಲಿ ಅನುಮೋದಿಸುವ ಕುರಿತು.

*********

2024–25ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ಸ್ವರ್ಣ ಪದಕ ದೇಣಿಗೆ ನೀಡಿರುವ ದಾನಿಗಳ ವಿವರಗಳು ಈ ಕೆಳಗಿನಂತಿವೆ.

| Sl. No. | Name of the Donor | Amount DD /Ch.No./ Date | In the Name of | Subject which related to |
|---|---|---|---|---|
| 1 | **Dr. Seema J. Patel**<br>**W/o Dr. G.N.H. Kumar**<br>#1833/15, Shiva sadana 2nd Main Road L.I.C. Colony, Davangere-577005 | 1,10,000/-<br>DD No:<br>535485,<br>31.01.2025<br>535486<br>01.02.2025 | Late Shri P.B. Narappa and Smt. Rudramma Memorial **GOLD MEDAL** | **M.Sc. Biotechnology**<br>(Student Who has obtained highest marks after considering all the semester marks) |

ಮೇಲ್ಕಂಡಂತೆ, ಸ್ವರ್ಣ ಪದಕವನ್ನು ಪ್ರಸ್ತುತ ಸಾಲಿನಲ್ಲಿ ನಡೆಯುವ 12ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪದಕ ವಿತರಣೆ ಮಾಡುವ ಕುರಿತು ದಿನಾಂಕ:18.03.2025ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗೆ ಸಲ್ಲಿಸಿದೆ.

### :: ನಿರ್ಣಯ ::

ದಾವಣಗೆರೆ ವಿಶ್ವವಿದ್ಯಾನಿಲಯದ M.Sc. Biotechnology - Student Who has obtained highest marks after considering all the semester marks ವಿದ್ಯಾರ್ಥಿಗೆ "Late Shri P.B. Narappa and Smt. Rudramma Memorial" ಇವರ ಹೆಸರಿನಲ್ಲಿ ಸ್ವರ್ಣ ಪದಕವನ್ನು ಸ್ಥಾಪನೆ ಮಾಡಲು ಸಭೆಯು ಒಮ್ಮತದಿಂದ ಅನುಮೋದನೆ ನೀಡಿತು.

ಕುಲಸಚಿವರು                                        ಕುಲಪತಿಗಳು

| ಶೈಕ್ಷಣಿಕ ವಿಭಾಗ – 24 | |
| --- | --- |
| ವಿಷಯ ಸಂಖ್ಯೆ: | ಸಿಂ.06(c)/(03/25) |

## –ಃ ಟಿಪ್ಪಣಿ ಃ–

ವಿಷಯಃ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪದವಿಯ **Physics,** ವಿಷಯದಲ್ಲಿ ಅತೀ ಹೆಚ್ಚು ಅಂಕ ಪಡೆದು ಪ್ರಥಮ ಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗೆ ಸ್ವರ್ಣ ಪದಕವನ್ನು ಸ್ಥಾಪನೆ ಮಾಡುವ ಪ್ರಸ್ತಾವನೆಯನ್ನು ಸಿಂಡಿಕೇಟ್ ಸಭೆಯಲ್ಲಿ ಅನುಮೋದಿಸುವ ಕುರಿತು.

*********

2024–25ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ಸ್ವರ್ಣ ಪದಕ ದೇಣಿಗೆ ನೀಡಿರುವ ದಾನಿಗಳ ವಿವರಗಳು ಈ ಕೆಳಗಿನಂತಿವೆ.

| Sl. No. | Name of the Donor | Amount DD /Ch.No./ Date | In the Name of | Subject which related to |
| --- | --- | --- | --- | --- |
